## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **15 (100)**
ಸದಸ್ಯರ ಹೆಸರು : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 15.07.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ಪ್ರೌಢಶಾಲಾ ಶಿಕ್ಷಕರು ಪ್ರಾಥಮಿಕ ಶಾಲೆಯಿಂದ ಪ್ರೌಢಶಾಲೆಗೆ ಬಡ್ತಿ ಹೊಂದಲು 3 ವರ್ಷಗಳ ಪದವಿ ಹಾಗೂ 2 ವರ್ಷಗಳ ಬಿ.ಎಡ್ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ) ವಿದ್ಯಾರ್ಹತೆಗಳ ಬಳಿಕ ಅವರ ಸೇವಾ ಜೇಷ್ಠತೆ ಆಧಾರದ ಮೇಲೆ ಬಡ್ತಿ ನೀಡಲಾಗುತ್ತಿರುವುದು ನಿಜವೇ;<br><br>ಒಬ್ಬ ದ್ವಿತೀಯ ದರ್ಜೆ ಸಹಾಯಕನಾಗಿ ನೇಮಕಾತಿ ಹೊಂದಿದ ನೌಕರ ಯಾವುದೇ ಹೆಚ್ಚಿನ ವಿದ್ಯಾರ್ಹತೆ ಪಡೆಯದಿದ್ದರೂ ಕೂಡ ಆತನಿಗೆ ಪ್ರಥಮ ದರ್ಜೆ ಸಹಾಯಕ, ಅಧೀಕ್ಷಕ, ಕಛೇರಿ ವ್ಯವಸ್ಥಾಪಕ, ಪತ್ರಾಂಕಿತ ವ್ಯವಸ್ಥಾಪಕರಾಗಿ ಬಡ್ತಿ ನೀಡಲಾಗುತ್ತಿರುವುದು ಸರಿಯೇ;<br><br>ಕೆ.ಸಿ.ಎಸ್.ಆರ್ ನಲ್ಲಿ ಎಲ್ಲಾ ನೌಕರರಿಗೂ ಒಂದೇ ನಿಯಮ ಅನ್ವಯಿಸಿದ್ದರಿಂದ ಕಳೆದ ಹಲವಾರು ವರ್ಷಗಳಿಂದ ಬಡ್ತಿ ಹೊಂದಿದ ಪ್ರೌಢಶಾಲಾ ಸಹ ಶಿಕ್ಷಕರು 10,15,20 ವರ್ಷಗಳ ವೇತನ ಬಡ್ತಿಗಳಿಂದ ವಂಚಿತರಾಗುತ್ತಿದ್ದು, ಈ ಶಿಕ್ಷಕರಿಗೆ ಆಗುತ್ತಿರುವ ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | 2016ರ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಅರ್ಹತೆ ಹೊಂದಿರುವ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಜೇಷ್ಠತೆ ಆಧಾರದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲಾಗುತ್ತಿದೆ.<br><br>ವೃಂದ ಮತ್ತು ನೇಮಕಾತಿ ನಿಯಮಗಳಡಿ ಅರ್ಹತೆ ಹೊಂದಿರುವ ನೌಕರರು / ಅಧಿಕಾರಿಗಳಿಗೆ ಮುಂಬಡ್ತಿ ನೀಡಲಾಗುತ್ತಿದೆ.<br><br>ಸರ್ಕಾರದ ಆದೇಶದ ಸಂಖ್ಯೆ: ಎಫ್‌ಡಿ 12 ಎಸ್ ಆರ್‌ಪಿ 2012(8), ದಿನಾಂಕ 14.06.2012ರಲ್ಲಿ ತಿಳಿಸಿರುವಂತೆ ಸೇವಾ ಅವಧಿಯಲ್ಲಿ ಯಾವುದೇ ಪದೋನ್ನತಿ ಪಡೆಯದೇ ಇರುವ ಶಿಕ್ಷಕರಿಗೆ ಮಾತ್ರ 20,25,30 ವರ್ಷಗಳ ಬಡ್ತಿ ಮಂಜೂರಾತಿ ಮಾಡಲು ಅವಕಾಶವಿರುತ್ತದೆ. ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ಪಡೆದಿರುವ ಶಿಕ್ಷಕರುಗಳಿಗೆ 20,25,30 ವರ್ಷಗಳ ವೇತನ ಬಡ್ತಿ ಮಂಜೂರಾತಿಗೆ ಅವಕಾಶವಿರುವುದಿಲ್ಲ.<br><br>ಹಲವಾರು ಪ್ರಕರಣಗಳಲ್ಲಿ ಪ್ರಾಥಮಿಕ/ಪ್ರೌಢ ಶಿಕ್ಷಕರಾಗಿ ಹಾಗೂ ಪದವಿ ಪೂರ್ವ ಉಪನ್ಯಾಸಕರಾಗಿ ಬಡ್ತಿ ಹೊಂದಿದ ಶಿಕ್ಷಕರು/ಉಪನ್ಯಾಸಕರುಗಳಿಗಿಂತ ಬಡ್ತಿ ಹೊಂದದೇ ಇರುವ ಕಾರಣಕ್ಕಾಗಿ ಹೆಚ್ಚುವರಿ ವೇತನ ಬಡ್ತಿಗಳನ್ನು ಪಡೆದ ಶಿಕ್ಷಕರ/ಉಪನ್ಯಾಸಕರ ವೇತನ ಹೆಚ್ಚಾಗಿರುವುದು ಕಂಡುಬಂದಿದೆ. 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಈ ಗೊಂದಲವನ್ನು ಹೋಗಲಾಡಿಸುವ ಕುರಿತಂತೆ ಕಡತ ಸಂಖ್ಯೆ: ಇಡಿ 147 ಎಸ್‌ಓಹೆಚ್ 2015ರಲ್ಲಿ ಆರ್ಥಿಕ ಇಲಾಖೆಯನ್ನು ಸಮಾಲೋಚಿಸಲಾಗಿ, ಆರ್ಥಿಕ |

ಇಲಾಖೆಯು ನೀಡಿರುವ ಅಭಿಪ್ರಾಯ ಈ ಕೆಳಕಂಡಂತಿದೆ.

"ಹಿರಿಯ ಮತ್ತು ಕಿರಿಯ ಸರ್ಕಾರಿ ನೌಕರರ ವೇತನದಲ್ಲಿನ ತಾರತಮ್ಯವನ್ನು ನಿವಾರಿಸಲು ಪ್ರಸ್ತುತ ಚಾಲ್ತಿಯಲ್ಲಿರುವ ವೇತನ ಎತ್ತರಿಕೆ (ಹೆಚ್ಚಳ) ನಿಯಮಗಳು/ಆದೇಶಗಳಲ್ಲಿ ಸರ್ವೇ ಸಾಮಾನ್ಯವಾಗಿ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಲಾಗಿರುತ್ತದೆ.
(ಅ) ಹಿರಿಯ ಮತ್ತು ಕಿರಿಯ ಸರ್ಕಾರಿ ನೌಕರರು ಒಂದೇ ಪದ ವೃಂದಕ್ಕೆ ಸೇರಿದವರಾಗಿರಬೇಕು

**ಮತ್ತು**

(ಆ) ಹಿರಿಯ ಮತ್ತು ಕಿರಿಯ ಸರ್ಕಾರಿ ನೌಕರರ ನಡುವಿನ ವೇತನದಲ್ಲಿನ ಅಸಮಾನತೆಯು ಒಂದೇ ಪದ ವೃಂದದಲ್ಲಿ ಲಭ್ಯವಿದ್ದ ವೇತನ ಬಡ್ತಿ/ಮುಂಬಡ್ತಿ ಸೌಲಭ್ಯಗಳನ್ನು ಮಂಜೂರು ಮಾಡಿರುವ ಕಾರಣದಿಂದ ಮಾತ್ರ ಉದ್ಭವಿಸಿರಬೇಕು.

ಪ್ರಸ್ತುತ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರು ಅವರು ಧಾರಣೆ ಮಾಡಿದ ಹುದ್ದೆಯಲ್ಲಿ ಕ್ರಮವಾಗಿ 10, 15, 20, 25 ಮತ್ತು 30 ವರ್ಷಗಳ ಪದೋನ್ನತಿ ರಹಿತ ಸೇವೆಗಾಗಿ ಲಭ್ಯವಿರುವ ಸೌಲಭ್ಯಗಳನ್ನು ಭಾಗಶ: ಪಡೆದ ನಂತರ ಅಥವಾ ಅವುಗಳನ್ನು ಪಡೆಯುವ ಪೂರ್ವದಲ್ಲಿಯೇ ಕ್ರಮವಾಗಿ ಪ್ರೌಢ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳ ಶಿಕ್ಷಕರ ಹುದ್ದೆಗೆ ಪದೋನ್ನತಿ ಪಡೆಯುವುದರಿಂದ ಮತ್ತು ಕೆಳಗಿನ ಹುದ್ದೆಯಲ್ಲಿ ಈ ಮೇಲಿನ ಎಲ್ಲಾ ಸೌಲಭ್ಯಗಳನ್ನು ಕಿರಿಯ ಶಿಕ್ಷಕರು ಪಡೆದ ಕಾರಣಕ್ಕೆ ಹಿರಿಯ ಮತ್ತು ಕಿರಿಯ ಶಿಕ್ಷಕರ ವೇತನದಲ್ಲಿ ಉಂಟಾಗಿರುವ ವೇತನ ವ್ಯತ್ಯಾಸವನ್ನು ಹಿರಿಯ ಮತ್ತು ಕಿರಿಯ ಶಿಕ್ಷಕರ ವೇತನದಲ್ಲಿನ ತಾರತಮ್ಯ ಎಂದು ಪರಿಗಣಿಸಲು ಬರುವುದಿಲ್ಲ. ಏಕೆಂದರೆ, ಸದರಿ ತಾರತಮ್ಯವು ಉಂಟಾದ ಅವಧಿಯಲ್ಲಿ ಅವರು ಕಾರ್ಯನಿರ್ವಹಿಸುತ್ತಿರುವ ವೃಂದ ಮತ್ತು ಅದಕ್ಕೆ ನಿಗದಿಪಡಿಸಲಾದ ವೇತನ ಶ್ರೇಣಿ ಪರಸ್ಪರ ಭಿನ್ನವಾಗಿದ್ದು, ಅವುಗಳನ್ನು ಹೋಲಿಸಲು ಬರುವುದಿಲ್ಲವಾದ್ದರಿಂದ ಹಿರಿಯ ಶಿಕ್ಷಕರ ವೇತನವನ್ನು ಕಿರಿಯ ಶಿಕ್ಷಕರ ವೇತನದ ಸಮಕ್ಕೆ ಎತ್ತರಿಸುವ ಪ್ರಮೇಯ ಉದ್ಭವಿಸುವುದಿಲ್ಲ.

ಮುಂದುವರೆದು, ಒಂದೊಮ್ಮೆ ಹಿರಿಯ ಶಿಕ್ಷಕರು 10 ಮತ್ತು 15 ವರ್ಷಗಳ ಪದೋನ್ನತಿ ರಹಿತ ಸೇವೆಗಾಗಿ ನಿಯಮಾನುಸಾರ ಲಭ್ಯವಿರುವ ಕಾಲಬದ್ಧ ಮುಂಬಡ್ತಿ ಹಾಗೂ ಹಿರಿಯ ವೇತನ ಶ್ರೇಣಿ ಮುಂಬಡ್ತಿ ಸೌಲಭ್ಯಗಳನ್ನು ಪಡೆಯುವುದಕ್ಕೂ ಪೂರ್ವದಲ್ಲಿಯೇ ಪದೋನ್ನತಿ ಪಡೆದಲ್ಲಿ, ಸಂದರ್ಭಾನುಸಾರ ಅಂತಹ ಹಿರಿಯ ಶಿಕ್ಷಕರು ಸದರಿ ಸೌಲಭ್ಯಗಳನ್ನು ಪಡೆಯವುದಕ್ಕೋಸ್ಕರ ಕೆಳಗಿನ ಹಂತದ ವೇತನ

| | | |
|---|---|---|
| | | ಶ್ರೇಣಿಯಲ್ಲಿಯೇ ಮುಂದುವರೆಯಲು ಲಿಖಿತ ಅಭಿಮತವನ್ನು ಪದೋನ್ನತಿ ಪಡೆದ 2 ತಿಂಗಳೊಳಗಾಗಿ ಸಲ್ಲಿಸಬಹುದು ಅಥವಾ ಅನುಕೂಲವಿಲ್ಲದ ಸಂದರ್ಭದಲ್ಲಿ ಸದರಿ ಸೌಲಭ್ಯಗಳನ್ನು ಅವನು ಪದೋನ್ನತಿ ಪಡೆದ ವೃಂದದಲ್ಲಿ ಪಡೆಯಬಹುದಾಗಿದೆ. ಒಂದೊಮ್ಮೆ ಮೇಲೆ ತಿಳಿಸಿದ ಸೌಲಭ್ಯಗಳನ್ನು ಅರ್ಜಿಸಿದ ನಂತರ, ಹಿರಿಯ ಶಿಕ್ಷಕರು ಕಾರ್ಯನಿರ್ವಹಿಸುತ್ತಿರುವ ವೃಂದಕ್ಕೆ ಕಿರಿಯ ಶಿಕ್ಷಕರು ಪದೋನ್ನತಿ ಪಡೆದಲ್ಲಿ ಅಂತಹ ಸಂದರ್ಭದಲ್ಲಿ ಹಿರಿಯ ಶಿಕ್ಷಕರ ವೇತನ ತಾರತಮ್ಯವನ್ನು ಸರಿಪಡಿಸಲು ಅವಕಾಶಗಳನ್ನು ಕಲ್ಪಿಸಲಾಗಿರುತ್ತದೆ. ಇಂತಹ ಸಂದರ್ಭಗಳಲ್ಲಿ ಅನ್ವಯಿಸುವ ಆದೇಶಗಳಲ್ಲಿನ ನಿಬಂಧನೆಗಳ ಪೂರೈಕೆಗೊಳಪಟ್ಟು ಹಿರಿಯ ಶಿಕ್ಷಕರರ ವೇತನವನ್ನು ಕಿರಿಯ ಶಿಕ್ಷಕರ ವೇತನದ ಸಮಕ್ಕೆ ಎತ್ತರಿಸಬಹುದಾಗಿರುತ್ತದೆ".<br><br>ಈ ಹಿನ್ನೆಲೆಯಲ್ಲಿ ಈಗಾಗಲೇ ಬಡ್ತಿ ಹೊಂದಿದ ಶಿಕ್ಷಕರಿಗೆ ಬಡ್ತಿ ಹೊಂದದ ಕಾರಣಕ್ಕಾಗಿ ಪಡೆಯುವ ಕಾಲಮಿತಿ ಬಡ್ತಿಗಳನ್ನು ನೀಡಲು ಸಾಧ್ಯವಿರುವುದಿಲ್ಲ. ಪ್ರಸ್ತುತ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಲ್ಲಿ ಪದೋನ್ನತಿ ಪಡೆಯುವುದರಿಂದ ಆಗುವ ವೇತನ ತಾರತಮ್ಯದ ಕುರಿತು ಸರಿಪಡಿಸಲು ಕೋರಿ 7ನೇ ವೇತನ ಆಯೋಗಕ್ಕೆ ಪತ್ರ ಬರೆಯಲಾಗಿದೆ. |
| ಆ) | ಶಿಕ್ಷಕರ ಅವಲಂಬಿತರ ವೈದ್ಯಕೀಯ ವೆಚ್ಚ ಮರುಪಾವತಿ ಸಂದರ್ಭದಲ್ಲಿ ಅವಲಂಬಿತ ಪ್ರಮಾಣ ಪತ್ರ ನೀಡಲು ಕಂದಾಯ ಇಲಾಖೆಯವರು ಒಂದೇ ಪಡಿತರ ಚೀಟಿಯಲ್ಲಿ ನೌಕರ ಹಾಗೂ ಅವಲಂಬಿತ ಇರಬೇಕೆನ್ನುವ ಷರತ್ತು ವಿಧಿಸುತ್ತಿರುವುದು ನೌಕರ ಹಾಗೂ ಅವಲಂಬಿತರ ಹೆಸರು ಇದ್ದರೂ ಕೂಡ ನೌಕರನ ಆದಾಯವನ್ನೇ ವೃದ್ಧ ತಂದೆ ತಾಯಿಗಳ ಆದಾಯವನ್ನಾಗಿ ಪರಿಗಣಿಸುತ್ತಿರುವುದು ನೌಕರರು ವೈದ್ಯಕೀಯ ವೆಚ್ಚ ಮರುಪಾವತಿಸಿಕೊಳ್ಳಲು ಸಮಸ್ಯೆಯಾಗುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಇ) | ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗಗಳಲ್ಲಿ ಹಿರಿಯ ಸಹ ಶಿಕ್ಷಕರ ಹುದ್ದೆಯಿದ್ದು, ಸದರಿ ಶಿಕ್ಷಕರು ಶಾಲೆಯ ಸಂಪೂರ್ಣ ಜವಾಬ್ದಾರಿ ನಿರ್ವಹಿಸುತ್ತಿದ್ದು, ಅಲ್ಲಿ ಪೂರ್ಣಕಾಲಿಕ ಮುಖ್ಯೋಪಾಧ್ಯಾಯರ / ಉಪಪ್ರಾಂಶುಪಾಲರ ಹುದ್ದೆ | ಉಪಪ್ರಾಂಶುಪಾಲರ ಹುದ್ದೆ ಮಂಜೂರಾಗದೇ ಇರುವ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದ ಆಡಳಿತ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಹಿರಿಯ ಶಿಕ್ಷಕರು ಪ್ರಭಾರ ಕಾರ್ಯ ನಿರ್ವಹಿಸುತ್ತಿದ್ದು, ಹುದ್ದೆ ಮಂಜೂರಾತಿ ಇಲ್ಲದಿರುವುದರಿಂದ ಸದರಿಯವರಿಗೆ ಪ್ರಭಾರ ಭತ್ಯೆ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ |

| | | |
|---|---|---|
| | ಮಂಜೂರಾಗದಿರುವುದರಿಂದ ಪ್ರಭಾರ ವಹಿಸಿರುವ ಹಿರಿಯ ಸಹ ಶಿಕ್ಷಕರಿಗೆ ಸೇವಾ ಸೌಲಭ್ಯಗಳು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; | |
| ಈ) | ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಥಮ ದರ್ಜೆ, ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಖಾಲಿ ಇದ್ದು, ಅತಿಥಿ ಶಿಕ್ಷಕರ ನೇಮಕಾತಿ ಮಾಡಿದಂತೆ ಅತಿಥಿ ಸಹಾಯಕರ ನೇಮಕಾತಿ ಮಾಡಿ ಗೌರವ ಧನ ನೀಡಿದ್ದಲ್ಲಿ, ಶಿಕ್ಷಕರು ಪಾಠ ಬೋಧನೆಯಲ್ಲಿ ತೊಡಗಿಸಿಕೊಳ್ಳಬಹುದಲ್ಲವೇ; | ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ದರ್ಜೆ ಸಹಾಯಕರ ಖಾಲಿ ಹುದ್ದೆಗಳನ್ನು ಅನುಕಂಪದ ಆಧಾರದ ನೇಮಕಾತಿಯಿಂದ ಹಾಗೂ ಬಡ್ತಿಯಿಂದ ತುಂಬಲಾಗುತ್ತಿದೆ. ಅತಿಥಿ ಸಹಾಯಕರ ನೇಮಕಾತಿಗೆ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಉ) | ಸರ್ಕಾರಿ ಪ್ರೌಢಶಾಲೆಗಳಲ್ಲಿ ಆಂಗ್ಲ ಮಾಧ್ಯಮಕ್ಕೆ ಅನುಮತಿ ನೀಡಿದಂತೆ ಅನುದಾನಿತ ಪ್ರೌಢ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ವಿಭಾಗ ಪ್ರಾರಂಭಿಸದಿರಲು ಕಾರಣವೇನು; | ಸರ್ಕಾರದ ಆದೇಶ ಸಂಖ್ಯೆ: ಇಪಿ 26 ಪಿಜಿಸಿ 2023 (ಭಾಗ-1), ದಿನಾಂಕ:04/09/2023ರಲ್ಲಿ ಖಾಸಗಿ ಅನದಾನರಹಿತ ಪ್ರೌಢಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಪ್ರಾರಂಭಿಸಲು ಅನುಮತಿಸಲಾಗಿದೆ.<br>ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗ ತೆರೆಯಲು ಅನುಮತಿ ನೀಡಿರುವುದಿಲ್ಲ. |
| ಊ) | ಪ್ರಸ್ತುತ ಸರ್ಕಾರವು ನೂತನ ಪಿಂಚಣಿ ರದ್ದುಗೊಳಿಸಿ ಹಳೆ ಪಿಂಚಣಿ ವ್ಯವಸ್ಥೆ ಜಾರಿಗೆ ತರುವ ಬಗ್ಗೆ ಗಮನ ಹರಿಸದಿರುವುದಕ್ಕೆ ಕಾರಣವೇನು; | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.<br>ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, 'ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ತನ್ನ ಸ್ವಂತ ಮೂಲಗಳಿಂದ ಭರಿಸುವ ಷರತ್ತಿಗೊಳಪಟ್ಟು "ದಿನಾಂಕ: |

| | | |
|---|---|---|
| | | 01.04.2006 ರಿಂದ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.<br><br>ಸರ್ಕಾರಿ ಆದೇಶ ಸಂಖ್ಯೆ: ಆಇ-ಪಿಇಎನ್89/ 2023, ದಿನಾಂಕ: 01.03.2023 ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತುಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿಯವರು ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ. |
| ಋ) | ಕಳೆದ 14 ವರ್ಷಗಳಿಂದ ಪ್ರೌಢಶಾಲೆಗಳಿಂದ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡದಿರಲು ಕಾರಣವೇನು? (ಸಂಪೂರ್ಣ ವಿವರ ನೀಡುವುದು) | ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ, ಸ್ನಾತಕೋತ್ತರ ವಿದ್ಯಾರ್ಹತೆ ಹೊಂದಿರುವ ಪ್ರೌಢ ಶಾಲಾ ಸಹ ಶಿಕ್ಷಕರುಗಳು ಗ್ರೇಡ್-2 ಇವರ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಸರ್ಕಾರದ ಆದೇಶ ಅವಶ್ಯವಿರುವುದಾಗಿ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರ ದಿನಾಂಕ:13-10-2023ರಲ್ಲಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರಿಗೆ ತಿಳಿಸಿರುತ್ತಾರೆ.<br><br>ಅದರಂತೆ, ಶಾಲಾ ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿನ ಸ್ನಾತಕೋತ್ತರ ಪದವಿ ಪಡೆದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ, ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಅಂತಿಮ ಒಂದೇ ಜೇಷ್ಠತಾ ಪಟ್ಟಿ ಮತ್ತು ವಿಷಯವಾರು ಅರ್ಹತಾ ಪಟ್ಟಿಯನ್ನು ಸಲ್ಲಿಸಲು ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ರವರ ಪತ್ರ ದಿನಾಂಕ:29-11-2023ರಂದು ಸರ್ಕಾರವನ್ನು ಕೋರಿದ್ದು, ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಪತ್ರ ಸಂಖ್ಯೆ:ಇಪಿ 164 ಎಸ್‌ಓಹೆಚ್ 2023 ದಿನಾಂಕ:02/01/2024ರಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳ ಪ್ರಕಾರ ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕಲ್ಪಿಸಿರುವ ಅವಕಾಶಗಳನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಹಂತದಲ್ಲಿಯೇ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿತ್ತು. |

| | | |
|---|---|---|
| | | ಈ ಸಂಬಂಧ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರ ದಿನಾಂಕ:02/02/2024 ಮತ್ತು ದಿನಾಂಕ:07/03/2024ರಲ್ಲಿ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಬೇಕಿದ್ದಲ್ಲಿ ಅನುಸರಿಸಬೇಕಾದ ಮಾನದಂಡಗಳ ಕುರಿತು ಸರ್ಕಾರದ ಆದೇಶ ಅವಶ್ಯವಿರುವುದಾಗಿ ತಿಳಿಸುತ್ತಾ ಹಾಗೂ ಯಾವುದೇ ಶಾಸನಬದ್ಧ ಆಧಾರವಿಲ್ಲದೇ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಿದ್ದಲ್ಲಿ ಸದರಿ ಪಟ್ಟಿಯನ್ನು ಪ್ರಶ್ನಿಸಿ ಮಾನ್ಯ ನ್ಯಾಯಾಲಯದಲ್ಲಿ ದಾವೆ ಹೂಡಿದ್ದಲ್ಲಿ ಪಟ್ಟಿ ತಯಾರಿಸುವಲ್ಲಿ ಇಲಾಖೆಯ ಕ್ರಮವನ್ನು ಊರ್ಜಿತಗೊಳಿಸುವ ಯಾವುದೇ ದಾಖಲೆಗಳು ಲಭ್ಯವಿಲ್ಲದೇ ಸದರಿ ಪಟ್ಟಿಯನ್ನು ಘನ ನ್ಯಾಯಾಲಯವು ಅನೂರ್ಜಿತಗೊಳಿಸುವ ಸಾಧ್ಯತೆ ಇರುವುದಾಗಿ ತಿಳಿಸಿರುತ್ತಾರೆ. ಅಲ್ಲದೇ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದ ವಿಭಾಗವಾರು ಜೇಷ್ಠತಾ ಪಟ್ಟಿಗಳನ್ನು ತಯಾರಿಸಿ ವಿಭಾಗವಾರು ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುತ್ತಿರುವ ಪ್ರಕ್ರಿಯೆಯನ್ನು ಪ್ರಶ್ನಿಸುವ ಸಾಧ್ಯತೆ ಇರುವುದಾಗಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರಿಗೆ ತಿಳಿಸಿರುತ್ತಾರೆ.<br><br>ಮೇಲಿನಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ) ಇವರ ಪತ್ರಗಳ ಹಿನ್ನೆಲೆಯಲ್ಲಿ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಯಾವುದೇ ನಿರ್ದೇಶನ ಅಥವಾ ಕ್ರಮಕೈಗೊಳ್ಳುವ ಸಕ್ಷಮ ಪ್ರಾಧಿಕಾರ ಸರ್ಕಾರವಾಗಿರುವುದರಿಂದ, ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರು ದಿನಾಂಕ:23-04-2024ರಂದು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಂತೆ ಶಾಲಾ ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿ ಸ್ನಾಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿ ಮತ್ತು ವಿಷಯವಾರು ಅರ್ಹತಾ ಪಟ್ಟಿಗಳನ್ನು ಸಿದ್ಧಪಡಿಸುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ |

| | | |
|---|---|---|
| | | ಕೋರಲಾಗಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಅಭಿಪ್ರಾಯ ಸ್ವೀಕೃತವಾದ ನಂತರ ನಿಯಮಾನುಸಾರ ಜೇಷ್ಠತಾ ಪಟ್ಟಿಯನ್ನು ಹೊರಡಿಸಿ, ತದನಂತರ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು. |

**ಸಂಖ್ಯೆ: ಇಪಿ 137 ಎಲ್‌ಬಿಪಿ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು